# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

*******************************************************************************

ಸಂಖ್ಯೆ: w-136/Committee/Proceding -28/2021-22 dt. 18-12-2020

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡಿರುವ ಮಾನ್ಯ ನೋಡಲ್ ಆಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

### ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಭಾ ಸದಸ್ಯರು ವಾರ್ಡ್ ವ್ಯಾಪ್ತಿಯ ರಸ್ತೆ ಗುಂಡಿಗಳನ್ನು ಮುಚ್ಚುವ ಬಗ್ಗೆ ಸಭೆಯುಲ್ಲಿ ಪ್ರಸ್ತಾಪಿಸಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ರಸ್ತೆ ಗುಂಡಿಗಳನ್ನು ಗುರ್ತಿಸಿದ್ದು ಹಾಗೂ ಗುಂಡಿಗಳನ್ನು ಮುಚ್ಚಿರುವ ಬಗ್ಗೆ ಸಭೆಯಲ್ಲಿ ತಿಳಿಸುತ್ತಾ ಇನ್ನು ಕೆಲವು ರಸ್ತೆ ಗುಂಡಿಗಳನ್ನು 2021-22ನೇ ಸಾಲಿನ ಕಾರ್ಯಕ್ರಮಗಳ ಪಟ್ಟಿಯಲ್ಲಿ ವಾರ್ಡ್‌ಗಳಿಗೆ 20.00 ಲಕ್ಷವನ್ನು ಮೀಸಲಿರಿಸಿದ್ದು ರೂ. 20.00 ಗಳಿಗೆ ಟೆಂಡರ್ ಪ್ರಕ್ರಿಯೆಯಲ್ಲಿದ್ದು ನಂತರದ ದಿನಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಶೀಥಿಲಗೊಂಡ ಕಟ್ಟಡಗಳನ್ನು ಗುರ್ತಿಸಿ ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಪರಿವೀಕ್ಷಣೆ ನಡೆಸಿ 1 ಶೀಥಿಲಗೊಂಡಿರುವ ಕಟ್ಟಡವನ್ನು ಗುರ್ತಿಸಿ ನೋಟೀಸ್ ನೀಡಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ವಾರ್ಡ್‌ವ್ಯಾಪ್ತಿಯಲ್ಲಿ ಕಂದಾಯ ವಸೂಲತಿಯ ಬಗ್ಗೆ ವಿವರಣೆ ಕೋರಿದರು.

ಸಂಬಂಧಿಸಿದ ಕಂದಾಯ ಅಧಿಕಾರಿಗಳು ಸಭೆಯಲ್ಲಿ ಮಾನ್ಯ ಆಯುಕ್ತರ ಅದೇಶದಂತೆ ದಿನಕ್ಕೆ 2.00 ಲಕ್ಷಗಳನ್ನು ವಸೂಲತಿ ಮಾಡುವಂತೆ ಆದೇಶಿಸಿದ್ದು ನಾವು ಪೂರ್ಣಪ್ರಮಾಣದಲ್ಲಿ ತೆರಿಗೆಯನ್ನು ಪಾವತಿಸಿಕೊಳ್ಳುತ್ತಿರುವುದಾಗಿ ಸಭೆಗೆ ತಿಳಿಸಿದರು ಹಾಗೂ ಮೈಸೂರು ರಸ್ತೆಯಲ್ಲಿ ಬರುವ ವಾಣಿಜ್ಯ ಕಟ್ಟಡಗಳಿಗೆ ನೋಟ್‌ಸ್ ನೀಡಿ ತೆರಿಗೆ ವಸೂಲತಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 ಇತ್ತಿಚೆಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 ವಾರ್ಡ್ ವ್ಯಾಪ್ತಿಯಲ್ಲಿ ಅಗತ್ಯವಿದ್ದಲ್ಲಿ ಆರ್.ಟಿ.ಪಿ.ಸಿ. ಆರ್ ಮತ್ತು ಇತರೆ ಟೆಸ್ಟ್‌ಗಳನ್ನು ಕೈಗೊಂಡು ಓಮಿಕ್ರಿಯಮ್ ವೈರಸ್ ಹರಡದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

---3

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆ ಮತ್ತು ವಿಲೇವರಿಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

.. ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -136ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಮತ್ತು ವಾಹನಗಳು ಹಾಜರಾಗುತ್ತಿದ್ದು ಕೆಲವು ಆಟೋಗಳು ಗೈರಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸುತ್ತ ಗೈರಾದ ಆಟೋಗಳಿಗೆ ಬಿಲ್ಲಿನಲ್ಲಿ ಮೊತ್ತ ಕಟ್ಟವು ಮಾಡುವುದಾಗಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್-136ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೇಸ್ಕಾಂಗೆ ಸಂಬಂಧಿಸಿದ ದೂರುಗಳು ಬಂದಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಾಂ) ರವರ ಪ್ರತಿನಿದಿಯು ಸದರಿ ವಿಷಯದ ಬಗ್ಗೆ ತುರ್ತು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಯ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ಸಭೆಯಲ್ಲಿ ತಿಳಿಸಿ, ದಿನಾಂಕ ನಿಗಧಿಪಡಿಸಿ ಕಾಮಗಾರಿಗಳ ಪರಿವೀಕ್ಷಣೆ ಮಾಡಲು ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ 136ರ ವ್ಯಾಪ್ತಿಯಲ್ಲಿ ಮಾಷಲ್‌ಗಳು ವಿಧಿಸಿದ ದಂಡದ ವಿವರವನ್ನು ಕೋರಿದರು.

ವಾರ್ಡ್-136ರ ಮಾಷಲ್ ಗಳು ಒಟ್ಟು ವಿಧಿಸಿದ ದಂಡ ರೂ. 5000 ಎಸ್ ಡಬ್ಲೂಎಂ. ದಂಡ ರೂ. 15,000 ಎಂದು ಸಭೆಯಲ್ಲಿ ತಿಳಿಸಿದರು ಸದರಿ ಹಣವನ್ನು ಮುಖ್ಯ ಕಛೇರಿಗೆ ಸಲ್ಲಿಸಿರುತ್ತಾರೆ.

---4

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಮಟ್ಟದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ|| ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | 18/12/21 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | Satish Kumar P |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | 18/12/21 |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ .<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು. ಚಾಮರಾಜಪೇಟೆ ವಿಭಾಗ ರವರ ಪ್ರತಿನಿಧಿ.<br>ಕಿರಿಯ ಆರೋಗ್ಯಾಧಿಕಾರಿಗಳು ಜಿ.ಎಂ. ಮುತ್ಯಾಲು<br>ದೂ. 9916444041 | ಸದಸ್ಯರು | G.M.Muthyalu |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮಿಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ<br>ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ದೂ.<br>ಪ್ರತಿನಿಧಿಎನ್. ಲಕ್ಷ್ಮಿ ನರಸಿಂಹಯ್ಯ<br>9845563157 | ಸದಸ್ಯರು | 18/12/21 |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಕುಮಾರ ಸ್ವಾಮಿ. ದೂ. 9060341644 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ<br>ಪ್ರತಿನಿಧಿ | ಸದಸ್ಯರು | Kantha Rao 18/12/2 |
| 12 | ಮಾಗಡಿ ರಸ್ತೆ ಸಂಚಾರ ಪೊಲೀಸ್ ಠಾಣೆ ಯ ಪ್ರತಿನಿಧಿ<br>ಶ್ರೀ ರಾಮಚಂದ್ರ ಎ. ಎ.ಎಸ್.ಐ ದೂ.9902992624 | ಸದಸ್ಯರು | HC8109 |
| 13 | ಜೆ.ಜೆ.ಆರ್ ನಗರ ಪೊಲೀಸ್ ಠಾಣೆ ಯ ಪ್ರತಿನಿಧಿ | ಸದಸ್ಯರು | Venkatesh.K HC9493 7022228831 |
| 14 | ವಾರ್ಡ್ 136 ಮಾರ್ಷಲ್, ಮುಬೀನ್ | ಸದಸ್ಯರು | |

Satish Kumar P
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 136

ಅಧ್ಯಕ್ಷರು 18/12/21
ಹಾಗೂ ನೋಡಲ್ ಅಧಿಕಾರಿ